ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 30ನೇ ಜನವರಿ, 2014

(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ದಿನಾಂಕ 24ನೇ ಜನವರಿ 2014ರಂದು ಶ್ರೀ ಬಸವರಾಜ ರಾಯರೆಡ್ಡಿ ಯವರು "2014ರ ಜನವರಿ 22ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ಸೂಚಿಸಿದ ಪ್ರಸ್ತಾಪದ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಐದನೇ ಪಟ್ಟಿ
ಆ) ದಿನಾಂಕ 27.01.2014ರ ಎರಡನೇ ಪಟ್ಟಿಯಿಂದ ವರ್ಗಾವಣೆಗೊಂಡ ಡಾ॥ ಉಮೇಶ್ ಜಿ. ಜಾಧವ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 16(293)	:	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಐದನೇ ಪಟ್ಟಿ

3. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2013-14ನೇ ಸಾಲಿನ ಸಮಿತಿಯ ಮೂರನೇ ವರದಿಯನ್ನು ಒಪ್ಪಿಸುವುದು.

ಪು.ತಿ.ನೋ.,

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಎನ್. ರಾಜಣ್ಣ ಅವರು ತುಮಕೂರು ವಿಶ್ವವಿದ್ಯಾಲಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಂತಿಮ ಬಿಎಸ್ಸಿ ವಿದ್ಯಾರ್ಥಿಗಳ ಗಣಿತಶಾಸ್ತ್ರ ಉತ್ತರ ಪತ್ರಿಕೆಗಳು ಕಾಣೆಯಾಗಿದ್ದು ಪ್ರಾಂಶುಪಾಲರು ಕರ್ತವ್ಯ ಲೋಪ ಎಸಗಿರುವ ಬಗ್ಗೆ ಮಾಡಿರುವ ಪ್ರಸ್ತಾಪಕ್ಕೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಉತ್ತರ.

2. ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ ಅವರುಗಳು ಹಾಸನ ಜಿಲ್ಲೆಯ ಸರ್ಕಾರಿ ಎಲ್.ವಿ. ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಸಂಜೆ ತರಗತಿಗಳನ್ನು ನಡೆಸಲು ಹಾಗೂ ಹೊಸ ಕೋರ್ಸ್‌ಗಳಿಗೆ ಅನುಮತಿ ನೀಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

3. ಶ್ರೀ ವಿ.ಸುನೀಲ್ ಕುಮಾರ್ ಅವರು ಕಾರ್ಕಳ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಹೆಬ್ರಿ ಹಾಗೂ ನಿಟ್ಟೆ ಗ್ರಾಮದಲ್ಲಿ ಪ್ರಾರಂಭಗೊಂಡಿರುವ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

4. ಶ್ರೀ ತನ್ವಿರ್ ಸೇಠ್ ಅವರು ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಇತ್ತೀಚೆಗೆ ನಡೆದ ಎ.ಟಿ.ಎಸ್. ಮತ್ತು ಎಸ್.ಸಿ.ವಿ.ಟಿ. ಪರೀಕ್ಷೆಗಳ ಹಲವಾರು ಪರೀಕ್ಷಾ ಕೇಂದ್ರಗಳಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯವುದು.

5. ಶ್ರೀ ಯು.ಬಿ. ಬಣಕಾರ ಅವರು ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕು ಮೈದೂರು ಗ್ರಾಮದ ಹಳೆಯ ಸರ್ಕಾರಿ ದಾಖಲೆಗಳನ್ನು ಸರಿಪಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6. ಡಾ॥ ರಫೀಕ್ ಅಹ್ಮದ್ ಎಸ್. ಅವರು ಹೇಮಾವತಿ ನೀರಾವರಿ ಸಲಹಾ ಸಮಿತಿಯ ನಿರ್ಧಾರದಂತೆ ತುಮಕೂರಿನ ಬುಗುಡನಹಳ್ಳಿ ಕೆರೆಗೆ ಕುಡಿಯುವ ನೀರನ್ನು ತುಂಬಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆಯಲ್ಲಿ ಕ್ರಷರ್‌ಗಳನ್ನು ನಡೆಸಲು ಹಾಗೂ ಮರಳು ತೆಗೆಯಲು ಸ್ಪಷ್ಟ ನಿಯಮಗಳನ್ನು ರೂಪಿಸದಿರುವುದರಿಂದ ಉಂಟಾಗಿರುವ ತೊಂದರೆ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,

8. ಶ್ರೀ ಅಶೋಕ ಖೇಣಿ ಅವರು ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರವನ್ನು ಹೊಸ ತಾಲ್ಲೂಕನ್ನಾಗಿ ರಚನೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9. ಶ್ರೀ ತನ್ವೀರ್ ಸೇಠ್ ಅವರು ಉದ್ಯೋಗ ಮತ್ತು ತರಬೇತಿ ಇಲಾಖೆಯಲ್ಲಿ ಸೀಮಿತ ಅವಧಿಗಾಗಿ ಸೃಜಿಸಲಾಗಿರುವ ಹುದ್ದೆಗಳ ಬಗ್ಗೆ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿ ಹುದ್ದೆಯನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯವುದು.

10. ಶ್ರೀ ಎನ್. ಚಲುವರಾಯಸ್ವಾಮಿ ಅವರು ಮಂಡ್ಯ ಜಿಲ್ಲೆಯಲ್ಲಿನ ಪ್ರವಾಸೋದ್ಯಮ ತಾಣಗಳನ್ನು ಅಭಿವೃದ್ಧಿ ಪಡಿಸುವ ಹಾಗೂ ತೊಣ್ಣೂರು ಮತ್ತು ಮೇಲುಕೋಟೆಗಳನ್ನು ವಿಶ್ವಪರಂಪರೆ ಪಟ್ಟಿಗೆ ಸೇರಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯವುದು.

11. ಶ್ರೀ ಸಿದ್ದು ನ್ಯಾಮಗೌಡ ಅವರು ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ಸಾವಳಗಿ ಹೋಬಳಿ ಕೇಂದ್ರವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಹೆಚ್. ಎಸ್. ಶಿವಶಂಕರ, ಶ್ರೀಮತಿ ಶಾರದಪೂರ್ಯ ನಾಯಕ್ ಶ್ರೀ ಡಿ.ಜಿ. ಶಾಂತನಗೌಡ, ಶ್ರೀ ಕೆ. ಶಿವಮೂರ್ತಿ, ಎಂ.ಪಿ. ರವೀಂದ್ರ ಮತ್ತು ವಡ್ನಾಳ ರಾಜಣ್ಣ ಅವರುಗಳು ಶಿವಮೊಗ್ಗ ಭದ್ರಾ ಜಲಾಶಯದಿಂದ ತುಂಗಾಭದ್ರ ಡ್ಯಾಂಗೆ ನೀರು ಹರಿಸುವ ಸರ್ಕಾರದ ನಿರ್ಣಯದಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಕೆ.ಎನ್. ರಾಜಣ್ಣ ಅವರು ಮಧುಗಿರಿ ವಿಧಾನಸಭಾ ಕ್ಷೇತ್ರದ ಬೇಡತ್ತೂರು ಚೆನ್ನಮ್ಮ ವಸತಿ ಶಾಲೆಯಲ್ಲಿ ಜರುಗುತ್ತಿರುವ ಅಕ್ರಮ ಚಟುವಟಿಕೆ ಮತ್ತು ಕರ್ತವ್ಯ ಲೋಪದ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

14. ಶ್ರೀ ಎಂ. ಪಿ. ಅಪ್ಪಚ್ಚು (ರಂಜನ್) ಅವರು ಕೊಡಗು ಜಿಲ್ಲೆ ಕಡಮಕಲ್ಲು ಕೊಚ್ಚುಲ ರಸ್ತೆಗಳನ್ನು ನಿರ್ಮಿಸಲು ಅರಣ್ಯ ಇಲಾಖೆಯಿಂದ ಅನುಮತಿ ನೀಡುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

15. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಚನ್ನರಾಯಪಟ್ಟಣ ತಾಲ್ಲೂಕಿನ ಜಿನಿವಾರ ಕೆರೆಯಿಂದ ಜುಟ್ಟನಹಳ್ಳಿ, ಹಿರೀಸಾವೆ ಮತ್ತು ಸುತ್ತಮುತ್ತಲಿನ ಕೆರೆಗಳಿಗೆ ನೀರನ್ನು ತುಂಬಿಸುವ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

16. ಶ್ರೀ ಹೆಚ್.ಎಸ್. ಶಿವಶಂಕರ ಅವರು ಹಿಂದುಳಿದ ಪ್ರದೇಶವಾದ ಹೈದ್ರಾಬಾದ್-ಕರ್ನಾಟಕದ ಗುಲಬರ್ಗಾದಲ್ಲಿ ಐ.ಟಿ./ಬಿ.ಟಿ ಇಲಾಖೆಯಿಂದ ಮಂಜೂರಾಗಿರುವ ವಿಶ್ವೇಶ್ವರಯ್ಯ ಕಾಲೇಜ್ ಆಫ್ ಅಪ್ಲೈಡ್ ಸೈನ್ಸ್‌ಸ್ ಬಯೋಟೆಕ್ನಾಲಜಿ ಫಿನಿಶಿಂಗ್ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಿರುವುದರಿಂದ ಆ ಭಾಗದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯವುದು.

17. ಶ್ರೀ ಎ.ಎಸ್.ಪಾಟೀಲ್ (ನಡಹಳ್ಳಿ) ಅವರು ಬಿಜಾಪುರ ಜಿಲ್ಲೆಯ ಬೂದಿಹಾಳ ಪೀರಾಪೂರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

18. ಶ್ರೀ ಎಸ್. ಟಿ. ಸೋಮಶೇಖರ್ ಅವರು ಕೆಂಗೇರಿ ಉಪ ನಗರದಲ್ಲಿ ಗ್ರಂಥಾಲಯವನ್ನು ಪ್ರಾರಂಭಿಸಲು ಹಂಚಿಕೆಯಾಗಿರುವ ಸಿಎ ನಿವೇಶನಕ್ಕೆ ಹಣವನ್ನು ಪಾವತಿಸದಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

19. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಬನಕೊಪ್ಪೆ ಪ್ರಾಥಮಿಕ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರು ಎಸ್.ಡಿ.ಎಂ.ಸಿ ಚೆಕ್ಕನ್ನು ದುರ್ಬಳಕೆ ಮಾಡಿಕೊಂಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

20. ಡಾ॥ ಸಿ.ಎನ್. ಅಶ್ವಥ್‌ನಾರಾಯಣ ಅವರು ಗಾಂಧಿನಗರ ಕ್ಷೇತ್ರದ ವ್ಯಾಪ್ತಿಗೆ ಬರುವ ಮಲ್ಲೇಶ್ವರಂ ಸಂಪಿಗೆ ರಸ್ತೆಯಲ್ಲಿರುವ ಮಂತ್ರಿ ಸ್ಕ್ವೇರ್‌ನವರು ಭೂಮಿ(ಸ್ವತ್ತು) ನಕ್ಷೆ, ಮೆಟ್ರೋ ಜೊತೆ ಒಡಂಬಡಿಕೆ ಮಾಡಿಕೊಂಡಿರುವ ಹಾಗೂ ಕೆ.ಐಎಡಿ.ಬಿ ಯವರು ಭೂ ಸ್ವಾಧೀನ ಪಡಿಸಿಕೊಂಡಿರುವ ಕಾರ್ಯದಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

21. ಶ್ರೀ ರುದ್ರಪ್ಪ ಮಾನಪ್ಪ ಲಮಾಣಿ ಅವರು ಹಾವೇರಿ ತಾಲ್ಲೂಕು ಕರ್ಜಗಿ ಮತ್ತು ಕೋಳೂರು ಗ್ರಾಮದಲ್ಲಿ ಬೆಂಕಿ ಅನಾಹುತದಿಂದ ನಷ್ಟವುಂಟಾಗಿರುವ ಬಡ ರೈತರಿಗೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

22. ಶ್ರೀ ಗುರು ಪಾಟೀಲ್ ಶಿರವಾಳ ಅವರು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣದಡಿ ಪ್ರಾರಂಭಿಸಲಾಗಿರುವ ಶಾಲಾ ಕಟ್ಟಡಗಳ ಕಾಮಗಾರಿ ವಿಳಂಬವಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

23. ಶ್ರೀ ವಿ. ಸುನೀಲ್ ಕುಮಾರ್ ಅವರು ಕಾರ್ಕಳ ತಾಲ್ಲೂಕು ಕಣಜಾರು ಗ್ರಾಮದ ಶ್ರೀ ಬ್ರಹ್ಮಲಿಂಗೇಶ್ವರ ದೇವಸ್ಥಾನವು ಬಿರುಗಾಳಿಯಿಂದಾಗಿ ಹಾನಿಯಾಗಿದ್ದು ಪುನರ್ ನಿರ್ಮಾಣ ಕಾಮಗಾರಿ ಆರಂಭಿಸುವ ಬಗ್ಗೆ ಸಣ್ಣ ಕೈಗಾರಿಕೆಗಳು, ಮುಜರಾಯಿ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

24. ಶ್ರೀ ಮಾನಪ್ಪ ಡಿ. ವಜ್ಜಲ ಅವರು ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ 2013ರ ಶೈಕ್ಷಣಿಕ ವರ್ಷದ 6ನೇ ತರಗತಿ ಪಠ್ಯ ಪುಸ್ತಕಗಳು ದೊರೆಯದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

25. ಶ್ರೀ ಎಲ್. ಎ. ರವಿ ಸುಬ್ರಮಣ್ಯ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಲೀಸ್ ಆಧಾರದಲ್ಲಿ ನೀಡಿರುವ ಆಸ್ತಿ-ಸ್ವತ್ತುಗಳಿಗೆ ಸರಿಯಾದ ಮಾರ್ಗಸೂಚಿ, ಮಾನದಂಡಗಳು ಇಲ್ಲದೇ ಪಾಲಿಕೆಗೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಅಪಾರ ನಷ್ಟವುಂಟಾಗುತ್ತಿರುವ ಕುರಿತು ಸರ್ಕಾರದ ಕ್ರಮಗಳೇನು ಎಂಬ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

26. ಶ್ರೀ ಎ. ಮಂಜು ಅವರು ರಾಜ್ಯದಲ್ಲಿನ ಕ್ಲಬ್/ ಸಂಸ್ಥೆಗಳ ಕಾರ್ಯಚಟುವಟಿಕೆಗಳ ಬಗ್ಗೆ ಸದನ ಸಮಿತಿ ಸಲ್ಲಿಸಿರುವ ಮಧ್ಯಂತರ ವರದಿಯ ಕುರಿತು ಕೈಗೊಂಡ ಕ್ರಮದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

27. ಶ್ರೀಯುತರುಗಳಾದ ರಾಜಾವೆಂಕಟಪ್ಪ ನಾಯಕ ಮತ್ತು ಗುರು ಪಾಟೀಲ್ ಶಿರವಾಳ ಅವರುಗಳು ಕೃಷ್ಣಾ ಭಾಗ್ಯ ಜಲ ನಿಗಮದಡಿ ಬರುವ ನೀರಾವರಿ ಜಮೀನುಗಳಿಗೆ ಮಾರ್ಚ್ 31ರ ವರೆಗೆ ನೀರನ್ನು ಕೊಡುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

28. ಶ್ರೀ ಪಿ.ಎಂ. ನರೇಂದ್ರಸ್ವಾಮಿ ಅವರು ಮಳವಳ್ಳಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಹಾಗೂ ಔಷಧೋಪಚಾರಗಳು ಸಿಗದೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

29. ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ) ಅವರು ವಿಜಾಪುರ ಜಿಲ್ಲೆ ದೇವರ ಹಿಪ್ಪರಗಿಯಲ್ಲಿರುವ ಬಸ್ ನಿಲ್ದಾಣವನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

30. ಶ್ರೀ ಮಧು ಎಸ್. ಬಂಗಾರಪ್ಪ ಅವರು ಸಾಗರ ತಾಲ್ಲೂಕು ಶರಾವತಿ ಹಿನ್ನೀರಿನ ಹೊಳೆಬಾಗಿಲು ಸೇತುವೆ ಕಾಮಗಾರಿಯು ಪ್ರಾರಂಭವಾಗದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

31. ಶ್ರೀ ಕೆ.ಎಸ್. ಪುಟ್ಟಣ್ಣಯ್ಯ ಅವರು ಸೆಂಟ್ರಲ್ ಪವರ್-ಗ್ರಿಡ್‌ಗೆ ಲೈನ್ ಹಾಕಲು ಜಮೀನುಗಳನ್ನು ಸ್ವಾಧೀನಪಡಿಸಿಕೊಂಡಿರುವ ಭೂ ಮಾಲೀಕರಿಗೆ ಪರಿಹಾರ ಮೊತ್ತವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

32. ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗೇರು ಕೃಷಿಕರಿಗೆ ನೀಡಿದ ಗೇಣಿ ಹಕ್ಕು ಜಮೀನುಗಳಿಗೆ ಸಂಬಂಧಿಸಿದಂತೆ ಶಾಶ್ವತ ಹಕ್ಕು ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

33. ಶ್ರೀ ಎಸ್.ಟಿ. ಸೋಮಶೇಖರ್ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ನಂಬರ್ 40ರ ದೊಡ್ಡ ಬಿದರಕಲ್ಲಿಗೆ ಒಳಪಡುವ ಅಂದ್ರಹಳ್ಳಿ ಹಾಗೂ ಚನ್ನನಾಯಕನಪಾಳ್ಯದಲ್ಲಿ ಕಾನೂನುಬಾಹಿರವಾಗಿ ಬಾರ್ ತೆರೆಯಲು ಪರವಾನಿಗೆ ನೀಡಿರುವ ಬಗ್ಗೆ ಮಾನ್ಯ ಅಬಕಾರಿ ಸಚಿವರ ಗಮನ ಸೆಳೆಯವುದು.

34. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಕ್ಕೆ ಸೇರಿದ ನಯನಕ್ಷೆತ್ರಿಯ ಸಮಾಜ ಮತ್ತು ಕುರುಹಿನಶೆಟ್ಟರ ಸಮಾಜಕ್ಕೆ ಸಮುದಾಯ ಭವನಗಳನ್ನು ನಿರ್ಮಾಣ ಮಾಡಲು ಪೂರ್ಣ ಹಣ ಬಿಡುಗಡೆಯಾಗದಿರುವುದರಿಂದ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

35. ಡಾ॥ ಸಿ.ಎನ್. ಅಶ್ವಥ್‌ನಾರಾಯಣ ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯೋಜನೆಯಾದ Road History Project ಅನ್ನು ಜಾರಿಗೊಳಿಸಲು ವಿಳಂಬ ಮಾಡುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

36. ಶ್ರೀ ಮಾನಪ್ಪ ಡಿ. ವಜ್ಜಲ ಅವರು ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಆನೆಹೂಸುರು, ಸಜ್ಜಲಗುಡ್ಡ, ಮುದಗಲ, ಗುರಗುಂಟ, ಹಟ್ಟಿ, ಮಸ್ಕಿ ಹೋಬಳಿಗಳಲ್ಲಿ ಮೂಲಭೂತ ಸೌಲಭ್ಯಗಳಿಲ್ಲದಿರುವುದರಿಂದ ಹಾಗೂ ಆರೋಗ್ಯ ಸೌಲಭ್ಯ ಇಲ್ಲದೇ ನಕಲಿ ವೈದ್ಯರುಗಳ ಹಾವಳಿ ಹೆಚ್ಚಾಗಿರುವುದರಿಂದ ಉಂಟಾಗಿರುವ ತೊಂದರೆ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

37. ಡಾ॥ ರಫೀಕ್ ಅಹಮದ್ ಅವರು ತುಮಕೂರು ನಗರ ಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಿದ್ದು ಹಾಲಿಯಿರುವ ಮಹಾನಗರ ಪಾಲಿಕೆ ಸದಸ್ಯರನ್ನು ಅವರ ಚುನಾಯಿತ ಅವಧಿಯವರೆಗೆ ಮುಂದುವರೆಸಲು ಕಾಯ್ದೆಯಲ್ಲಿ ಸೂಕ್ತ ತಿದ್ದುಪಡಿ ಮಾಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

38. ಡಾ॥ ಎ.ಬಿ. ಮಾಲಕರೆಡ್ಡಿ ಅವರು ಯಾದಗಿರಿ ಜಿಲ್ಲೆಯಲ್ಲಿ ಸಹಕಾರ ಸಂಘಗಳಿಗೆ ಸರ್ಕಾರ ರೈತರ ಸಾಲ ಮನ್ನಾ ಹಣವನ್ನು ಬಿಡುಗಡೆ ಮಾಡದಿರುವುದರಿಂದ ರೈತರಿಗೆ ಬೆಳೆ ಸಾಲ ನೀಡಲು ತೊಂದರೆಯಾಗಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಕೆ.ಎಸ್. ಮಂಜುನಾಥ್‌ಗೌಡ, ಬಿ.ಸುರೇಶ್‌ಗೌಡ, ಎಂ.ಕೃಷ್ಣಾರೆಡ್ಡಿ ಹಾಗೂ ವೈ.ಎನ್. ರುದ್ರೇಶ್‌ಗೌಡ ಹಾಗೂ ಇತರರು ಬಯಲು ಸೀಮೆ ಪ್ರದೇಶಗಳಾದ ಅರಸೀಕೆರೆ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಇತರ ಪ್ರದೇಶಗಳಲ್ಲಿ ಎತ್ತಿನಹೊಳೆ ಯೋಜನೆಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2. ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಹೆಚ್.ಡಿ. ಕುಮಾರಸ್ವಾಮಿ, ಸಿ.ಟಿ. ರವಿ ಬಿ.ಬಿ. ನಿಂಗಯ್ಯ, ಕೆ.ಜಿ. ಬೋಪಯ್ಯ ಹಾಗೂ ಇತರರು ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನ ಕಳಸಾ ಹೋಬಳಿಯ ಇನಾಂ ಭೂಮಿ ಸಾಗುವಳಿ ತೆರವು ಕಾರ್ಯಾಚರಣೆ ಆರಂಭಿಸಿರುವುದರಿಂದ ರೈತ ಕುಟುಂಬಗಳಿಗೆ ತೊಂದರೆಯುಂಟಾಗುತ್ತಿರುವ ಬಗ್ಗೆ ಚರ್ಚೆ.

3. ಶ್ರೀಯುತರಾದ ಎ.ಎಸ್. ಪಾಟೀಲ್(ನಡಹಳ್ಳಿ) ಶಿವಾನಂದ ಎಸ್. ಪಾಟೀಲ್ ಹೆಚ್.ವೈ. ಮೇಟಿ, ವಿಜಯಾನಂದ ಎಸ್ ಕಾಶಪ್ಪನವರ, ಮಕಬುಲ್ ಎಸ್. ಭಾಗವಾನ್ ಹಾಗೂ ಇತರರು ಅವಳಿ ಜಿಲ್ಲೆಗೆ ನೀರಾವರಿ ಯೋಜನೆಗಳ ನೀರಿನ ಹಂಚಿಕೆಯನ್ನು ಬಚಾವತ್ ತೀರ್ಪಿನಡಿಯಲ್ಲಿ ಹಂಚಿಕೆಯಾದ 173 ಟಿ.ಎಂ.ಸಿ ನೀರಿನಲ್ಲಿ ಕನಿಷ್ಠ 105 ಟಿ.ಎಂ.ಸಿ ನೀರನ್ನು ಮರುಹಂಚಿಕೆ ಮಾಡುವ ವಿಷಯದ ಬಗ್ಗೆ ಚರ್ಚೆ.

4. ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಗೋವಿಂದ ಕಾರಜೋಳ, ಸಂಜಯ ಬಿ. ಪಾಟೀಲ್, ಉಮೇಶ್ ಕತ್ತಿ, ಸಿ.ಟಿ. ರವಿ ಹಾಗೂ ಇತರರು ರಾಜ್ಯದಲ್ಲಿ ಕಬ್ಬು ಬೆಳೆಗೆ ನಿಗದಿತ ಬೆಲೆ ಘೋಷಣೆಯಾಗಿದ್ದರೂ ಸಕ್ಕರೆ ಕಾರ್ಖಾನೆಯವರು ಘೋಷಿತ ಬೆಲೆಯನ್ನು ಪಾವತಿಸುತ್ತಿಲ್ಲದಿರುವುದರಿಂದ ರೈತರು ಆತಂಕಕ್ಕೆ ಒಳಗಾಗಿರುವ ವಿಷಯದ ಬಗ್ಗೆ ಚರ್ಚೆ.

5. ಶ್ರೀಯುತರುಗಳಾದ ಬಿ. ಸುರೇಶ್‌ಗೌಡ, ಕೆ.ಜಿ. ಬೋಪಯ್ಯ, ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ತುಮಕೂರು ಮತ್ತು ತುಮಕೂರು ಗ್ರಾಮಾಂತರ ಪ್ರದೇಶಗಳಲ್ಲಿ ಕಾಡಾನೆಗಳ ಹಾವಳಿಯಿಂದ ರೈತರು ಕೃಷಿ ಚಟುವಟಿಕೆ ಮಾಡಲು ತೊಂದರೆಯಾಗುತ್ತಿದ್ದು ಈ ಕುರಿತು ಸೂಕ್ತ ಕ್ರಮ ಕೈಗೊಳ್ಳುವ ವಿಷಯದ ಬಗ್ಗೆ ಚರ್ಚೆ.

6. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ಬಿ.ಬಿ. ನಿಂಗಯ್ಯ, ಎಂ.ಜೆ. ಅಪ್ಪಾಜಿ, ಹೆಚ್.ಎಸ್. ಶಿವಶಂಕರ ಹಾಗೂ ಶ್ರೀಮತಿ ಶಾರದ ಪೂರ್ಯ ನಾಯ್ಕ ಅವರುಗಳು ಅರಣ್ಯ ಜಮೀನುಗಳಲ್ಲಿ ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ ರೈತರಿಗೆ ಜಮೀನನ್ನು ಮಂಜೂರು ಮಾಡಲು ಹಕ್ಕುಗಳನ್ನು ಮಾನ್ಯ ಮಾಡುವ ಅಧಿನಿಯಮದನ್ವಯ ಗ್ರಾಮ ಸಮಿತಿಗಳನ್ನು ರಚಿಸಿ ಬಗರ್ ಹುಕುಂ ಸಾಗುವಳಿದಾರರಿಗೆ ಹಕ್ಕು ಪತ್ರ ವಿತರಿಸುವ ವಿಷಯದ ಬಗ್ಗೆ ಚರ್ಚೆ.

ಪು.ತಿ.ನೋ.,

7. ಶ್ರೀಯುತರುಗಳಾದ ಎಸ್.ಟಿ. ಸೋಮಶೇಖರ್, ಬಿ.ಎ. ಬಸವರಾಜ್ ಮತ್ತು ಬಿ. ಶಿವಣ್ಣ ಅವರುಗಳು ಬೆಂಗಳೂರು ದಕ್ಷಿಣ ತಾಲ್ಲೂಕಿನ ಕೆಂಗೇರಿ ಹೋಬಳಿಯ ಕೆ.ಗೊಲ್ಲಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಗೋಣಿಪುರ, ತಿಪ್ಪೂರು, ಸೀಗೇಹಳ್ಳಿ ಹಾಗೂ ಇತರೆ ಗ್ರಾಮಕ್ಕೆ ಸೇರಿದ ಜಮೀನನ್ನು ಕೆ.ಐ.ಎ.ಡಿ.ಬಿ ಯು ನೈಸ್ ಸಂಸ್ಥೆಯ ಟೌನ್‌ಶಿಪ್ ನಂ.1 ಗಾಗಿ ಭೂಸ್ವಾಧೀನ ಪಡಿಸಿಕೊಂಡಿರುವುದರಿಂದ ರೈತರಿಗಾಗಿರುವ ಅನಾನುಕೂಲದ ಬಗ್ಗೆ ಚರ್ಚೆ.

6. ಖಾಸಗಿ ಸದಸ್ಯರ ಕಾರ್ಯಕಲಾಪಗಳು

1. ***ಶ್ರೀ ಎಸ್.ಆರ್.ವಿಶ್ವನಾಥ್ , ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.***

"ನಿಗಮಿತ(Corporate)ಸಾಮಾಜಿಕಹೊಣೆಗಾರಿಕೆಚಟುವಟಿಕೆಗಳ (CSR activities) ಪೈಕಿ ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಸಂಬಂಧಪಟ್ಟ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿ ಚಟುವಟಿಕೆಗಳ ಸಲುವಾಗಿ ಸಾರ್ವಜನಿಕ ಉದ್ದಿಮೆಗಳು/ಕಂಪನಿಗಳು/ರಾಜ್ಯ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳು/ ಖಾಸಗಿ ಕಂಪನಿಗಳು ಪ್ರತಿ ವರ್ಷ ತಮ್ಮ ಲಾಭದ ಅಂಶದಲ್ಲಿ ಒಂದು ಪಾಲಿನ ಕೊಡುಗೆ"ಯನ್ನು ನೀಡುವ ಬಗ್ಗೆ ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ."

2. ***ಶ್ರೀ ಪಿ.ಎಂ.ನರೇಂದ್ರಸ್ವಾಮಿ, ಅವರು ಕೆಳಕಂಡ ನಿರ್ಣಯಗಳನ್ನು ಮಂಡಿಸುವುದು.***

ಅ) "ಇಡೀ ರಾಜ್ಯದಲ್ಲಿ ಮದ್ಯವನ್ನು ಮಾರುವುದಕ್ಕಾಗಿ ಅಬಕಾರಿ ಇಲಾಖೆಯು ಸಿ.ಎಲ್-2 ಪರವಾನಿಗೆಯನ್ನು ಕೊಡುತ್ತಿದ್ದು 1991ರಿಂದ ಮೀಸಲಾತಿ ನಿಯಮವನ್ನು ಪಾಲಿಸಿಲ್ಲದಿರುವುದರ ಜೊತೆಗೆ 2011ರ ಜನಗಣತಿಯ ಪ್ರಕಾರ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಜನಸಂಖ್ಯೆಯು ಕೂಡ ಹೆಚ್ಚಾಗಿರುವುದರಿಂದ ಹೆಚ್ಚಾದ ಜನಸಂಖ್ಯೆಗನುಗುಣವಾಗಿ ಮೀಸಲಾತಿ ನಿಯಮಗಳನ್ನು ಪಾಲನೆ ಮಾಡಿ 1500 ಪರವಾನಗಿಗಳನ್ನು ಈ ವರ್ಗದ ಜನಾಂಗದವರಿಗೆ ಮಂಜೂರು ಮಾಡುವ" ಬಗ್ಗೆ ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ."

ಆ) "ಸರ್ಕಾರವು ಹೊರಗುತ್ತಿಗೆ, ಅರೆಸರ್ಕಾರಿ ಹಾಗೂ ಅತಿಥಿ ಹುದ್ದೆಗಳು ಎನ್ನುವ ವಿವಿಧ ಹೆಸರಿನಡಿಯಲ್ಲಿ ಹಲವಾರು ಹುದ್ದೆಗಳನ್ನು ಭರ್ತಿಮಾಡಿಕೊಳ್ಳುತ್ತಿದ್ದು ಇದು ಸಂವಿಧಾನ ಬಾಹಿರವಾಗಿರುತ್ತದೆ. 45 ದಿವಸಗಳಿಗಿಂತಲೂ ಹೆಚ್ಚಿನ ಅವಧಿಗೆ ತುಂಬಿಕೊಳ್ಳುವ ಯಾವುದೇ ರೀತಿಯ ನೇಮಕಾತಿಯಲ್ಲಿಯೂ ಮೀಸಲಾತಿ ನಿಯಮವನ್ನು ಸಂವಿಧಾನದ ಪ್ರಕಾರ ಪಾಲಿಸಬೇಕಾಗುತ್ತದೆ. ಆದುದರಿಂದ, ಸರ್ಕಾರವು ಹೊರಗುತ್ತಿಗೆ, ಅರೆಸರ್ಕಾರಿ ಹಾಗೂ ಅತಿಥಿ ಹುದ್ದೆಗಳು ಎಂದು ಹಲವಾರು ರೀತಿಯಲ್ಲಿ ಭರ್ತಿ ಮಾಡುತ್ತಿರುವ ಹುದ್ದೆಗಳಲ್ಲಿ ಮೀಸಲಾತಿಯನ್ನು ಚಾಚೂ ತಪ್ಪದೆ ಪಾಲಿಸಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದ ಜನಾಂಗದವರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ."

ಪು.ತಿ.ನೋ.,

ಇ) "ಗಣಿಗಾರಿಕೆಗೆ ಸಂಬಂಧಪಟ್ಟಂತೆ ಅಲಾಟ್‌ಮೆಂಟ್ Minor and Major Mining activities ಗೆ ಸಂಬಂಧಪಟ್ಟಂತೆ ಇಲಾಖೆಯವರು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದವರಿಗೆ ಮೀಸಲಾತಿ ನಿಯಮದಂತೆ ಅವಕಾಶವನ್ನು ಕಲ್ಪಿಸಿಲ್ಲದಿರುವುದರಿಂದ ಈ ವರ್ಗದ ಜನರು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಮುಂದೆ ಬರಲು ಸಂವಿಧಾನದಲ್ಲಿ ಯಾವ ರೀತಿಯ ಅವಕಾಶವನ್ನು ಈ ವರ್ಗದ ಜನರಿಗೆ ಕಲ್ಪಿಸಿಕೊಡಬೇಕೆಂದು ಹೇಳಲಾಗಿದೆಯೋ ಅದನ್ನು ಚಾಚೂತಪ್ಪದೆ ಪಾಲಿಸುವ ಕುರಿತು" ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ."

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)